## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಹುಣಸೆಪಾಳ್ಯ ಗ್ರಾಮದ ಪರಿಶಿಷ್ಟ ಜಾತಿ ರುದ್ರಭೂಮಿ ಕಾಮಗಾರಿಯಲ್ಲಿ ಸುಳ್ಳು ಬಿಲ್ಲು ಸೃಷ್ಟಿಸಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಅಧಿಕಾರಿಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ವರದಿ – ವಿವರವಾದ ಇಲಾಖಾ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ-ಆದೇಶ

ಓದಲಾಗಿದೆ :-

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರ ಅ.ಸ.ಪತ್ರ ಸಂಖ್ಯೆ : Compt / Uplok / Mys-126,241 & 242/ 2016 / DRE-4, ದಿನಾಂಕ : 22.04.2017
2. ಮಾನ್ಯ ಉಪಲೋಕಾಯುಕ್ತರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ12(3)ರ ವರದಿ ಸಂಖ್ಯೆ : Compt / Uplok / Mys-126, 241 & 242/ 2016, ದಿನಾಂಕ : 31.03.2017

*****

ಪ್ರಸ್ತಾವನೆ :

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ :22.04.2017ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಮಾನ್ಯ ಉಪಲೋಕಾಯುಕ್ತರವರ ದಿನಾಂಕ : 31.03.2017ರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರಿಗೆ ಕಳುಹಿಸಿ ಮಾನ್ಯ ಉಪಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿದ್ದು ಸದರಿ ದಾಖಲೆಗಳನ್ನು ಲೋಕೋಪಯೋಗಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಲೋಇ 174 ಸೇಇವಿ 2017, ದಿ:13.06.2017 ರ ಜೊತೆ ಕಳುಹಿಸಿ ಈ ಇಲಾಖೆಗೆ ಕಳುಹಿಸಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಸದರಿ ವರದಿಗೆ ಲಗತ್ತಿಸಿರುವ ತನಿಖಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಹುತ್ತೂರು ಗ್ರಾಮ ಪಂಚಾಯಿತಿ ಹುಣಸೆಪಾಳ್ಯ ಗ್ರಾಮದ ಪರಿಶಿಷ್ಟ ಜಾತಿ ಹಿಂದೂ ರುದ್ರ ಭೂಮಿಗೆ ಸುತ್ತುಗೋಡೆ ಕಾಮಗಾರಿಗಳಲ್ಲಿ ಅವ್ಯವಹಾರ ಹಾಗೂ ಹಣ ದುರುಪಯೋಗವಾಗಿರುತ್ತವೆಂದು ಆರೋಪಿಸಿ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲು ಕೋರಿ ಶ್ರೀ ಅಂತೋಣಿರಾಜು ಬಿನ್ ದೊರೈಸ್ವಾಮಿ, ಬುದ್ಧ ಮಂದಿರ ಹತ್ತಿರ, ಕಣ್ಣೂರು ಗ್ರಾಮ ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿರುತ್ತಾರೆ :-

1. ಶ್ರೀ ಸಿ.ಮಹದೇವಯ್ಯ, ತಹಶೀಲ್ದಾರ್, ಕೊಳ್ಳೇಗಾಲ ತಾಲ್ಲೂಕ್
2. ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಕೊಳ್ಳೇಗಾಲ
3. ಶ್ರೀ ಸಿದ್ದಪ್ಪಾಜಿಗೌಡ, ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಕೊಳ್ಳೇಗಾಲ

ಅದರನುಸಾರ ಲೋಕಾಯುಕ್ತ ಸಂಸ್ಥೆಯಲ್ಲಿ ಕೈಗೊಳ್ಳಲಾದ ತನಿಖೆಯನುಸಾರ ಪ್ರಶ್ನಿತ ಕಾಮಗಾರಿಯನ್ನು ಉದ್ದೇಶಪೂರಕವಾಗಿ ನಿರ್ವಹಿಸದೆ ದಾಖಲಾತಿಗಳನ್ನು ಸೃಷ್ಟಿಸಿ ಸರ್ಕಾರದ ಬೊಕಸಕ್ಕೆ 3.50 ಲಕ್ಷ ಹಣವನ್ನು ದುರ್ಬಳಕೆ ಮಾಡಿರುವುದರಿಂದ ಸದರಿ ಆಪಾಧಿತರಿಂದ ಸಮಾನಾಗಿ ಆಗಿರುವ ನಷ್ಟ ರೂ.1,16,670/- ಗಳಂತೆ ವಸೂಲಿ ಮಾಡಿ ಸರ್ಕಾರಕ್ಕೆ ನಷ್ಟ ಭರಿಸುವಂತೆ ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ಈ ಮೇಲಿನ ಆಪಾದಿತ ಅಧಿಕಾರಿಗಳಿಗೆ ತನಿಖಾ ವರದಿಯ ಪ್ರತಿಯನ್ನು ಕಳುಹಿಸಿ, ಅವರಿಂದ ಈ ಬಗ್ಗೆ ಉತ್ತರ/ಆಕ್ಷೇಪಣೆ ಸಲ್ಲಿಸುವಂತೆ ತಿಳಿಸಿದಕ್ಕೆ ಪ್ರತಿಯಾಗಿ ಆಪಾಧಿತ ಅಧಿಕಾರಿಗಳ ಪೈಕಿ ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ದಿ:24.03.2017ರಂದು ಸಲ್ಲಿಸಿರುವ ಪತ್ರದಲ್ಲಿ ಆಕ್ಷೇಪಣೆ ಸಲ್ಲಿಸಲು 30 ದಿನಗಳ ಕಾಲಾವಕಾಶ ಕೋರಿದ್ದು, ಅವರ ಕೋರಿಕೆಯನ್ನು ಪರಿಗಣಿಸಿರುವುದಿಲ್ಲವೆಂದು ಹಾಗೂ ಇನ್ನುಳಿದಂತೆ ಇನಿಬ್ಬರು ಆಪಾಧಿತ ಅಧಿಕಾರಿಗಳು ಯಾವುದೇ ಆಕ್ಷೇಪಣೆ ಸಲ್ಲಿಸಿರುವುದಿಲ್ಲದ ಕಾರಣ ಅವರುಗಳ ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಪರಿಗಣಿಸಿ ದಾಖಲೆಗಳನ್ನು ಆಧಾರಿಸಿ ಸದರಿ ಆಪಾಧಿತ ಅಧಿಕಾರಿಗಳು ಪ್ರಶ್ನಿತ ಕಾಮಗಾರಿಗಳಲ್ಲಿ ಉದ್ದೇಶ ಪೂರಕವಾಗಿ ಅವ್ಯವಹಾರ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ ಸದರಿ ಆರೋಪಿತ ಅಧಿಕಾರಿಗಳ ಆರೋಪಗಳ ಬಗ್ಗೆ ವಿವರವಾದ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ಕರ್ನಾಟಕ ನಾಗರೀಕ್ ಸೇವಾ ನಿಯಮ 14(ಎ)ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವಂತೆ ಶಿಫಾರಸ್ಸು ಮಾಡಿದ್ದಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಹುತ್ತೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಹುಣಸೆಪಾಳ್ಯ ಗ್ರಾಮದ ಪರಿಶಿಷ್ಟ ಜಾತಿ ಹಿಂದು ರುದ್ರ ಭೂಮಿ ಸುತ್ತು ಗೋಡೆ ಕಾಮಗಾರಿಯನ್ನು ಉದ್ದೇಶ ಪೂರ್ವಕವಾಗಿ ನಿರ್ವಹಿಸದೇ ಸುಳ್ಳು ಬಿಲ್ಲು ಸೃಷ್ಟಿಸಿ ಸರ್ಕಾರದ ಬೊಕ್ಕಸಕ್ಕೆ ರೂ.3.50ಲಕ್ಷಗಳನ್ನು ನಷ್ಟ ಉಂಟುಮಾಡಿರುವ ಅಧಿಕಾರಿಗಳ ಪೈಕಿ ಕಂದಾಯ ಇಲಾಖೆಗೆ ಸೇರಿದ ಶ್ರೀ ಸಿ.ಮಹದೇವಯ್ಯ, ತಹಶೀಲ್ದಾರ್, ಕೊಳ್ಳೆಗಾಲ ತಾಲ್ಲೂಕು ಇವರ ವಿರುದ್ಧ ಶಿಸ್ತು ಪ್ರಕರಣವನ್ನು ಕಂದಾಯ ಇಲಾಖೆಯಲ್ಲಿ ಕ್ರಮ ವಹಿಸುತ್ತಿರುವುದರಿಂದ ಸದರಿಯವರನ್ನು ಹೊರತುಪಡಿಸಿ ಇನ್ನುಳಿದ ಇಬ್ಬರು ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ಈ ಇಲಾಖೆಯಲ್ಲಿ ಪರಿಶೀಲಿಸಿದೆ. ಸದರಿ ಇಬ್ಬರು ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘನೆ ಮಾಡಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದು, ಸದರಿ ಇಬ್ಬರು ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ತೀರ್ಮಾನಿಸಿ, ಸದರಿ ಆಪಾದಿತರ

ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 72 ಇಎನ್‌ಕ್ಯೂ 2017**
**ಬೆಂಗಳೂರು, ದಿನಾಂಕ : 22.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರ ರವರಿಗೆ ವಹಿಸಿ ಆದೇಶಿಸಿದೆ :-

1. ಶ್ರೀ ನಿಂಗಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಕೊಳ್ಳೇಗಾಲ
2. ಶ್ರೀ ಸಿದ್ದಪ್ಪಾಜಿಗೌಡ, ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಕೊಳ್ಳೇಗಾಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

22/08/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ :-

1. ಮಹಾಲೇಖಪಾಲರು, (ಲೆಕ್ಕಪತ್ರ ಅ & ಇ) ಕರ್ನಾಟಕ, ಬೆಂಗಳೂರು
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ / ಕಂದಾಯ ಇಲಾಖೆ
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ
6. ಸಂಬಂಧಪಟ್ಟ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ ರವರ ಮುಖಾಂತರ

ಪ್ರತಿಯನ್ನು :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.

2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
3. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
4. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು